# ಕನ್ನಡ ಸಾಹಿತ್ಯ ಪರಿಷತ್ತು

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦ ೦೧೮
ದೂರವಾಣಿ : ೦೮೦ ೨೬೬೧೨೯೯೧, ೨೬೬೨೩೫೮೪   ಫ್ಯಾಕ್ಸ್ : ೨೬೫೨೩೮೬೬
http://www.kasapa.in   e-mail : kannadaparishattu@gmail.com


---

ಕ್ರಮಸಂಖ್ಯೆ : ಕಸಾಪ / **ಪ್ರಕಟಣೆ**/ ೨೦೨೨–೨೩ ದಿನಾಂಕ : ೦೬-೧೦-೨೦೨೨

*ಇವರಿಗೆ*
**ಸಂಪಾದಕರು / ಮುಖ್ಯ ವರದಿಗಾರರು**
.................................................ಬೆಂಗಳೂರು

ಪ್ರಕಟಣೆಯ ಕೃಪೆಗಾಗಿ

## ನ. ೧ರಂದು ಎಲ್ಲರ ಮನೆಯ ಮೇಲೆ ಕನ್ನಡಧ್ವಜ ಹಾರಿಸೋಣ
## - ನಾಡೋಜ ಡಾ. ಮಹೇಶ ಜೋಶಿ ಕರೆ

**ಬೆಂಗಳೂರು:** ಕನ್ನಡಿಗರ ಸ್ವಾಭಿಮಾನದ ಪ್ರತೀಕವಾದ ಕನ್ನಡದ ಧ್ವಜವನ್ನು ರಾಜ್ಯೋತ್ಸವದ ದಿನದಂದು ಎಲ್ಲ ಕನ್ನಡಿಗರು ತಮ್ಮ ಮನೆಯ ಮೇಲೆ ಹಾರಿಸುವ ಮೂಲಕ, ಕನ್ನಡದ ಕಣ್ವ ಎಂದೇ ಖ್ಯಾತರಾದ ಬಿ.ಎಮ್.ಶ್ರೀಕಂಠಯ್ಯನವರು ರಚಿಸಿದ “**ಏರಿಸಿ ಹಾರಿಸಿ ಕನ್ನಡದ ಬಾವುಟ, ಹಾರಿಸಿ ತೋರಿಸಿ ಕೆಚ್ಚೆದೆಯ ಬಾವುಟ**” ಎನ್ನುವಂತೆ ಅರ್ಥಪೂರ್ಣವಾಗಿ ಕನ್ನಡ ಪ್ರೇಮವನ್ನು ಮೆರೆಯೋಣ ಎಂದು **ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಕರೆ** ನೀಡಿದ್ದಾರೆ.

ನವೆಂಬರ್ ೧ ರಂದು ರಾಜ್ಯೋತ್ಸವವನ್ನು ಪ್ರತಿಯೊಬ್ಬ ಕನ್ನಡಿಗರು ಸಂಭ್ರಮದಿಂದ ಆಚರಿಸುತ್ತಾರೆ. ಅದರೊಂದಿಗೆ ಈ ಬಾರಿ ಪ್ರತಿಯೊಬ್ಬ ಕನ್ನಡಿಗನೂ ನಮ್ಮ ಭಾಷೆ, ಸಂಸ್ಕೃತಿ, ಪರಂಪರೆಯ ಧ್ಯೋತಕವಾದ ಕನ್ನಡದ ಧ್ವಜವನ್ನು ಸ್ವ-ಇಚ್ಚೆಯಿಂದ ಹೆಮ್ಮೆಯಿಂದ ಪ್ರತಿಯೋಬ್ಬರ ಮನೆಯ ಮೇಲೆ ಹಾರಿಸುವ ಮೂಲಕ ಕನ್ನಡದ ಹಬ್ಬವನ್ನು ಆಚರಿಸೋಣ. ನಾಡಿನಾದ್ಯಂತ ಎಲ್ಲೆಡೆಯೂ ಹಳದಿ ಕೆಂಪು ಬಣ್ಣವು ರಾರಾಜಿಸಲಿ, ಸ್ಪೂರ್ತಿಯ ಸೆಲೆ ಎಲ್ಲೆಡೆಯೂ ಪಸರಿಸಲಿ, ಎಲ್ಲರ ಮನ-ಮನೆಯಲ್ಲೂ ಕನ್ನಡತನ ಮೆರೆಯಲಿ ಎಂದು **ನಾಡೋಜ ಡಾ. ಮಹೇಶ ಜೋಶಿ** ಆಶಯ ವ್ಯಕ್ತಪಡಿಸಿದ್ದಾರೆ.

ಕನ್ನಡ ಸಾಹಿತ್ಯ ಪರಿಷತ್ತು ಕನ್ನಡ-ಕನ್ನಡಿಗ-ಕರ್ನಾಟಕ ಎನ್ನುವ ಧ್ಯೇಯದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು ರಾಜ್ಯೋತ್ಸವ ಸಂದರ್ಭದಲ್ಲಿ ಕನ್ನಡಿಗರೆಲ್ಲರೂ ಉತ್ಸಾಹದಿಂದ ಕನ್ನಡಹಬ್ಬದಲ್ಲಿ ಪಾಲ್ಗೊಂಡು ನಾಡು ನುಡಿಯ ಸಮೃದ್ಧಿ ಶ್ರೀಮಂತಿಕೆ, ಉನ್ನತಿಯನ್ನು ಮೆರೆಯೋಣ. ಈ ಸಂದರ್ಭದಲ್ಲಿ ನಾಡಿನ ಸಾಂಸ್ಕೃತಿಕ ಪರಂಪರೆಯನ್ನು ಸಾರುವ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ರಾಜ್ಯೋತ್ಸವವನ್ನು ವೈಭವ ಪೂರ್ಣವಾಗಿ ಆಚರಿಸಬೇಕಾಗಿದೆ ಎಂದು ಹೇಳಿದರು.

**ಶ್ರೀನಾಥ್ ಜೆ.**
ಮಾಧ್ಯಮ ಸಲಹೆಗಾರರು
ಕನ್ನಡ ಸಾಹಿತ್ಯ ಪರಿಷತ್ತು ಬೆಂಗಳೂರು